# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯಡಿಯಲ್ಲಿ ಗ್ರಾಮ ಪಂಚಾಯಿತಿ ಕಟ್ಟಡಗಳ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:-**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪಂರಾ 609 ಜಿಪಸ 2020, ದಿನಾಂಕ:20-01-2021.
2. ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯ ರಾಜ್ಯ ಕಾರ್ಯಕಾರಿ ಸಮಿತಿ ಅಧ್ಯಕ್ಷರ ಅಧ್ಯಕ್ಷತೆಯಲ್ಲಿ ನಡೆದ ಸಭಾವಳಿ ದಿನಾಂಕ:23.06.2021.
3. ಆಯುಕ್ತಾಲಯದ ಕಡತ ಸಂಖ್ಯೆ: KPRC-DEV/314/2022.

**ಪ್ರಸ್ತಾವನೆ:**

ಮೇಲೆ ಓದಲಾದ (1) ಆದೇಶದನ್ವಯ ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆ ಉಳಿತಾಯ ಖಾತೆ ಸಂಖ್ಯೆ:052110026480 ಬ್ಯಾಂಕ್ ಆಫ್ ಬರೋಡ, ಇಂದಿರಾ ನಗರ, ಬೆಂಗಳೂರು ಇಲ್ಲಿ ಲಭ್ಯವಿದ್ದ ಒಟ್ಟು ಮೊತ್ತ ರೂ.23,77,79,011/-ಗಳನ್ನು ವಿವಿಧ ಕಾರ್ಯಕ್ರಮ / ಚಟುವಟಿಕೆಗಳ ಸುಗಮ ನಿರ್ವಹಣೆ / ಅನುಷ್ಠಾನಕ್ಕಾಗಿ ಸರ್ಕಾರವು ಆಗ್ಗಿಂದಾಗ್ಗೆ ನೀಡುವ ನಿರ್ದೇಶನಗಳನ್ವಯ ವೆಚ್ಚ ಮಾಡುವಂತೆ ಹಾಗೂ ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯ ಮಾರ್ಗಸೂಚಿಯಂತೆ ಸರ್ಕಾರದ ಅನುಮೋದನೆ ಪಡೆದು ಸದರಿ ಅನುದಾನವನ್ನು ಬಳಸಿಕೊಳ್ಳುವಂತೆ ಮತ್ತು ಕೇಂದ್ರ ಸರ್ಕಾರದಿಂದ ಸದರಿ ಯೋಜನೆಯಡಿ ಅನುದಾನ ಬಿಡುಗಡೆಯಾದ ನಂತರ ಮರು ಹೊಂದಾಣಿಕೆ ಮಾಡಿಕೊಳ್ಳುವ ಷರತ್ತಿಗೊಳಪಟ್ಟು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರು ಮೈಸೂರಿನ ATI ಶಾಖೆಯ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದಲ್ಲಿ "LAB TO LAND IEC" ಹೆಸರಿನಲ್ಲಿ ಹೊಂದಿರುವ ಬ್ಯಾಂಕ್ ಖಾತೆ ಸಂಖ್ಯೆ:64116710979, IFSC ಸಂಖ್ಯೆ:SBIN0041010ಕ್ಕೆ ಬಿಡುಗಡೆ ಮಾಡಲು ಮುಖ್ಯ ನಿಬಂಧಕರು, ಬ್ಯಾಂಕ್ ಆಫ್ ಬರೋಡಾ, ಹೆಚ್.ಎ.ಎಲ್ 3ನೇ ಹಂತ, ಇಂದಿರಾ ನಗರ, ಬೆಂಗಳೂರು ಇವರಿಗೆ ಸೂಚಿಸಿ ಆದೇಶಿಸಲಾಗಿತ್ತು.

ಮೇಲೆ ಓದಲಾದ(2)ರ ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:23-06-2021ರಂದು ನಡೆದ ರಾಜ್ಯ ಕಾರ್ಯಕಾರಿ ಸಮಿತಿ ಸಭಾ ನಡವಳಿಯನ್ವಯ ಹೊಸ ಕಟ್ಟಡಗಳನ್ನು ನಿರ್ಮಿಸಲು ಹಾಗೂ ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳನ್ನು ಹೊಂದಿರುವ ಗ್ರಾಮ ಪಂಚಾಯಿತಿಗಳ ದುರಸ್ತಿ ಕಾಮಗಾರಿಯನ್ನು ಕೈಗೊಳ್ಳಲು ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯಡಿ ಲಭ್ಯವಿರುವ ಅನುದಾನವನ್ನು ಉಪಯೋಗಿಸಿಕೊಳ್ಳುವ ಬಗ್ಗೆ ನಿರ್ಣಯಿಸಲಾಗಿದ್ದು, ಅದರಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಗ್ರಾಮ ಪಂಚಾಯತಿಗಳ ಮಾಹಿತಿಯನ್ನು ಪಡೆದು ಮುಂದಿನ ಕ್ರಮವಹಿಸಲು ತೀರ್ಮಾನಿಸಲಾಗಿರುತ್ತದೆ.

ದಿನಾಂಕ:23-06-2021ರ ಸಭಾ ನಡವಳಿಯನ್ವಯ ರಾಜ್ಯದಲ್ಲಿ ಹೊಸದಾಗಿ ರಚನೆ ಆಗಿರುವ 463 ಗ್ರಾಮ ಪಂಚಾಯಿತಿಗಳ ಹೊಸ ಕಟ್ಟಡಗಳ ನಿರ್ಮಾಣಕ್ಕೆ MGNREGA ಹಾಗು ಇತರೆ ಯೋಜನೆಗಳ ಅನುದಾನಗಳ ಮೊತ್ತವನ್ನು ಒಗ್ಗೂಡಿಸುವಿಕೆ ಮೂಲಕ ಕೈಗೊಳ್ಳಲು 225 ಗ್ರಾಮ ಪಂಚಾಯಿತಿಗಳಿಗೆ ತಲಾ ರೂ.10.00 ಲಕ್ಷಗಳನ್ನು ಮೊದಲನೇ ಕಂತಾಗಿ ಬಿಡುಗಡೆ ಮಾಡಲಾಗಿದ್ದು, ಸದರಿ ಪಂಚಾಯಿತಿಗಳ ಪೈಕಿ ಅನುಬಂಧದಲ್ಲಿ ತಿಳಿಸಿದ 12 ಗ್ರಾಮ ಪಂಚಾಯಿತಿಗಳು ಎರಡನೇ ಕಂತಿನ ಅನುದಾನವನ್ನು ಬಿಡುಗಡೆಗೊಳಿಸುವಂತೆ ಕೋರಲಾದ ಪ್ರಸ್ತಾವನೆಗಳಿಗೆ ಅನುದಾನ ಬಿಡುಗಡೆ ಮಾಡುವಂತೆ ಕೋರಿ ಮೇಲೆ ಓದಲಾದ(3)ರ ಕಡತದಲ್ಲಿ ಆಯುಕ್ತರು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಆಯುಕ್ತಾಲಯ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ. ಅದರಂತೆ, ಅನುಬಂಧದಲ್ಲಿ ನಮೂದಿಸಿರುವ 12 ಗ್ರಾಮ ಪಂಚಾಯತಿಗಳ ಕಟ್ಟಡ ನಿರ್ಮಾಣಕ್ಕಾಗಿ ತಲಾ ರೂ.10.00 ಲಕ್ಷಗಳಂತೆ ಒಟ್ಟು ರೂ.120.00ಲಕ್ಷ (ಒಂದು ನೂರ ಇಪ್ಪತ್ತು ಲಕ್ಷ ರೂಪಾಯಿಗಳು ಮಾತ್ರ) ಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಗಳ ವರ್ಗ-01ರ ಬ್ಯಾಂಕ್ ಖಾತೆಗೆ ಬಿಡುಗಡೆ ಮಾಡಿ ವರ್ಗಾಯಿಸಬೇಕಾಗಿರುತ್ತದೆ. ಆದ್ದರಿಂದ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪಂರಾ 215 ಜಿಪಸ 2022, ಬೆಂಗಳೂರು, ದಿನಾಂಕ:14-10-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಹೊಸದಾಗಿ ರಚನೆಯಾಗಿರುವ 463 ಗ್ರಾಮ ಪಂಚಾಯಿತಿಗಳ ಹೊಸ ಕಟ್ಟಡಗಳ ನಿರ್ಮಾಣಕ್ಕೆ MGNREGA ಹಾಗು ಇತರೆ ಯೋಜನೆಗಳ ಅನುದಾನಗಳ ಮೊತ್ತವನ್ನು ಒಗ್ಗೂಡಿಸುವಿಕೆ ಮೂಲಕ ಕೈಗೊಳ್ಳಲು 225 ಗ್ರಾಮ ಪಂಚಾಯಿತಿಗಳಿಗೆ ತಲಾ ರೂ.10.00 ಲಕ್ಷಗಳನ್ನು ಮೊದಲನೇ ಕಂತಾಗಿ ಬಿಡುಗಡೆ ಮಾಡಲಾಗಿದ್ದು, ಸದರಿ ಪಂಚಾಯಿತಿಗಳ ಪೈಕಿ ಈ ಆದೇಶಕ್ಕೆ ಲಗತ್ತಿಸಲಾದ ಅನುಬಂಧದಲ್ಲಿನ 12 ಗ್ರಾಮ ಪಂಚಾಯಿತಿಗಳಿಗೆ ಎರಡನೇ ಕಂತಿನ ಅನುದಾನ ತಲಾ ರೂ.10.00 ಲಕ್ಷಗಳಂತೆ ಒಟ್ಟು ರೂ.120.00 ಲಕ್ಷ(ಒಂದು ನೂರ ಇಪ್ಪತ್ತು ಲಕ್ಷ ರೂಪಾಯಿಗಳು ಮಾತ್ರ)ಗಳನ್ನು ರಾಷ್ಟ್ರೀಯ ಗ್ರಾಮ ಸ್ವರಾಜ್ ಅಭಿಯಾನ ಯೋಜನೆಯಡಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ATI ಶಾಖೆಯ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದಲ್ಲಿ LAB TO LAND IEC ಹೆಸರಿನಲ್ಲಿ ಹೊಂದಿರುವ ಬ್ಯಾಂಕ್ ಖಾತೆ ಸಂಖ್ಯೆ:64116710979, IFSC Code:SBIN0041010ರಲ್ಲಿ ಲಭ್ಯವಿರುವ ಅನುದಾನದಿಂದ ಸಂಬಂಧಪಟ್ಟ ಗ್ರಾಮ ಪಂಚಾಯತಿಗಳ ಖಾತೆಗೆ RTGS ಮೂಲಕ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಬಿಡುಗಡೆ ಮಾಡಲು ನಿರ್ದೇಶಕರು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ಆದೇಶಿಸಿದೆ.

**ಷರತ್ತುಗಳು:-**

1. ಈ ಅನುದಾನವನ್ನು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಲಾಗಿದೆಯೋ, ಅದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸತಕ್ಕದ್ದು.
2. ಗ್ರಾಮ ಪಂಚಾಯಿತಿ ಕಟ್ಟಡಗಳನ್ನು ನಿರ್ಮಿಸಿ, ಪೂರ್ಣಗೊಂಡ ವರದಿ ಮತ್ತು ಹಸ್ತಾಂತರಗೊಂಡ ವರದಿ, ಕಟ್ಟಡಗಳ ಛಾಯಾಚಿತ್ರಗಳನ್ನು ಮತ್ತು ಹಣ ಬಳಕೆ ಪ್ರಮಾಣ ಪತ್ರಗಳನ್ನು ಪಂಚಾಯತ್ ರಾಜ್ ಆಯುಕ್ತಾಲಯಕ್ಕೆ ಸಲ್ಲಿಸತಕ್ಕದ್ದು.

3. ಗ್ರಾಮ ಪಂಚಾಯಿತಿಯ ಇತರೆ ಯಾವುದೇ ಯೋಜನೆಯಡಿ/ಕಾರ್ಯಕ್ರಮದಡಿ/ಲೆಕ್ಕ ಶೀರ್ಷಿಕೆಯಡಿ ಯಾವುದೇ ಕಾರಣಕ್ಕೂ ಪುನರಾವರ್ತನೆಯಾಗಿರುವುದಿಲ್ಲವೆಂಬ ಅಂಶವನ್ನು ದೃಢಪಡಿಸಿಕೊಳ್ಳತಕ್ಕದ್ದು.
4. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕ ಅಧಿನಿಯಮ, 1999/2000 ರಲ್ಲಿ ಸೂಚಿಸಿರುವ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸುವುದು.

ಈ ಆದೇಶವನ್ನು ಸರ್ಕಾರದ ಆದೇಶ ಸಂ:ಎಫ್‌ಡಿ 1 ಟಿಎಫ್‌ಪಿ 2022, ದಿನಾಂಕ:04-04-2022ರನ್ವಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

M. M. Raju 14/10/22

(ಎಂ.ಎಂ.ರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

14/10/2022

ಇವರಿಗೆ:

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ (ಪಿ.ಬಿ.ನಂ.5398) ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ (ಪಿ.ಬಿ.ನಂ.5329) ಬೆಂಗಳೂರು.
4. ನಿರ್ದೇಶಕರು ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಆಯುಕ್ತರು(ಪಂ.ರಾಜ್), ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ.ರಸ್ತೆ, ಬೆಂಗಳೂರು.
6. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್, ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.
7. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ದಕ್ಷಿಣ ಕನ್ನಡ, ಮೈಸೂರು, ಬೆಳಗಾವಿ, ಧಾರವಾಡ, ಗದಗ, ಉತ್ತರ ಕನ್ನಡ, ಚಿತ್ರದುರ್ಗ ಮತ್ತು ಹಾಸನ.
8. ಇಲಾಖಾ ವೆಬ್‌ಸೈಟ್/ಕರ್ನಾಟಕ ವಿಕಾಸ ಮಾಸ ಪತ್ರಿಕೆ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:-</u>

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.